# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 09/ಸಭೆ/ಪಿಆರ್/02/2022-23

ದಿನಾಂಕ : 21/05/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ 09 ವಿದ್ಯಾರಣ್ಯಪುರ ವಾರ್ಡ್ ಕಛೇರಿಯಲ್ಲಿ ದಿನಾಂಕ 21/05/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ
2. ಶ್ರೀ ಈರಣ್ಣ, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಡಾ|| ಪುಷ್ಪಲತ, ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ
4. ಶ್ರೀಮತಿ ಧನಲಕ್ಷ್ಮಿ ಎಂ, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ
5. ಶ್ರೀ ಕೆ.ಎನ್ ಬಾಬು ರೆಡ್ಡಿ, ಕಿರಿಯ ಅಭಿಯಂತರರು (ವಿದ್ಯುತ್), ಬಿಬಿಎಂಪಿ
6. ಶ್ರೀ ಪಿ.ಎಂ ಮಲಯಾದ್ರಿ, ಕೆಲಸ ಪರಿವೀಕ್ಷಕರು, ತೋಟಗಾರಿಕೆ
7. ಶ್ರೀ ಎಸ್.ಶೇಖರ್, ಕೆಲಸ ಪರಿವೀಕ್ಷಕರು, ಅರಣ್ಯ ಇಲಾಖೆ
8. ಶ್ರೀ ಕೌಶಿಕ್, ಪಿ.ಎಸ್.ಐ, ಕೊಡಿಗೆಹಳ್ಳಿ ಪೋಲೀಸ್ ಠಾಣೆ
9. ಶ್ರೀ ಸಿದ್ದರಾಜು, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು**

1. ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು
2. ಸಾರ್ವಜನಿಕರು

ಶ್ರೀ ಈರಣ್ಣ, ಸಹಾಯಕ ಅಭಿಯಂತರರು:- ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು.

ನೋಡೆಲ್ ಅಧಿಕಾರಿ ರವರು ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು**

ಮಾಂಸದ ಅಂಗಡಿಗಳ ಹತ್ತಿರ ಕಸದ ವಿಲೇವಾರಿ ಸಮರ್ಪಕವಾಗಿ ನಿರ್ವಹಿಸದೆ ಕಸವನ್ನು ಜಿ.ಕೆ.ವಿ.ಕೆ ರಿಂಗ್ ರಸ್ತೆ ಹತ್ತಿರ ಎಸೆಯುತ್ತಿರುವುದರಿಂದ ನಾಯಿಗಳು ರಸ್ತೆಗೆ ಎಳೆದು ತರುತ್ತವೆ, ಚಿಕನ್ ಮತ್ತು ಮಟನ್ ಅಂಗಡಿಗಳಲ್ಲಿ ಕತ್ತರಿಸಿದ ಮಾಂಸವನ್ನು ಚರಂಡಿಗೆ ಎಸೆದು ಕೆರೆ ಸೇರಿ ನೀರು ಕಲುಷಿತಗೊಳ್ಳುತ್ತಿರುವುದರಿಂದ ಎಚ್ಚರವಹಿಸಲು ಹಾಗೂ ಅಂಗಡಿಗಳ ಸುತ್ತ ಮುತ್ತ ಸ್ವಚ್ಛತೆಯನ್ನು ಕಾಪಾಡುವಂತೆ ಕೋರಿದರು.

**ಕ್ರಮ: ಹಿರಿಯ ಆರೋಗ್ಯ ಪರಿವೀಕ್ಷಕರು**

ಹೆಚ್.ಎಂ.ಟಿ ಲೇಔಟ್ 1ನೇ ಬ್ಲಾಕ್, 1ನೇ ಹಂತದಲ್ಲಿ ಕಸ ವಿಲೇವಾರಿ ಸಮರ್ಪಕವಾಗಿ ನಿರ್ವಹಿಸುತ್ತಿಲ್ಲ, ದುರ್ಗಾ ಬಡಾವಣೆಯಲ್ಲಿ ಹಸಿ ಕಸ ವಿಲೇವಾರಿ ಸಮರ್ಪಕವಾಗಿದ್ದು, ಒಣ ಕಸ ವಿಲೇವಾರಿ ಮಾಡುತ್ತಿರುವುದಿಲ್ಲ, ಎಲ್ಲಾ ಬಡಾವಣೆಯ ಮುಖ್ಯ ರಸ್ತೆಗಳಲ್ಲಿ ರಸ್ತೆ ಗುಡಿಸುವಿಕೆ ಕಾರ್ಯ ನಿರ್ವಹಿಸುತ್ತಿದ್ದು, ಅಡ್ಡ ರಸ್ತೆಗಳಲ್ಲಿ ಕಸ ಗುಡಿಸುವಿಕೆ ಕಾರ್ಯ ನಿರ್ವಹಿಸುತ್ತಿರುವುದಿಲ್ಲ,

**ಕ್ರಮ: ಸಕಾಅ, ಘ.ತ್ಯಾ.ನಿ**

ವಿರೂಪಾಕ್ಷಪುರ, ಬುದ್ಧ ಜ್ಯೋತಿ ಬಡಾವಣೆ, ಆನಂದ ಬಡಾವಣೆ, ಜೈ ಹನುಮಾನ್ ಬಡಾವಣೆಗಳಲ್ಲಿ ಡಾಂಬರೀಕರಣ ಕಾಮಗಾರಿ ಪ್ರಾರಂಭವಾಗಿರುವುದಿಲ್ಲ ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಕಾಮಗಾರಿಯನ್ನು ಶೀಘ್ರವೇ ಪ್ರಾರಂಭಿಸುವಂತೆ ಕೋರಿರುತ್ತಾರೆ,

ಬೆಸ್ಕಾಂ, ಗೇಲ್, ಜಿಯೋ ಮತ್ತು ಏರ್‌ಟೆಲ್ ಕಂಪೆನಿಗಳು ಕೇಬಲ್‌ಗಳನ್ನು ಅಳವಡಿಸಲು 1.00 X 1.50 ಮೀ ಪಿಟ್‌ಅನ್ನು ಅಳವಡಿಸಿದ್ದು, ರಿಸ್ಟೋರ್ ಮಾಡದೆ ಹಾಗೆಯೇ ಬಿಟ್ಟಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬಾ ತೊಂದರೆ ಉಂಟಾಗಿರುತ್ತದೆ ಆದ್ದರಿಂದ ರಿಸ್ಟೋರ್ ಮಾಡಲು ಕೋರಿದ್ದು, ಸದರಿ ಕಂಪೆನಿಗಳು ರಸ್ತೆ ಅಗೆದಿರುವುದು ಮೇಲ್ನೋಟಕ್ಕೆ ಅನಧಿಕೃತವೆಂದು ಕಂಡು ಬರುತ್ತಿರುವುದರಿಂದ ಮುಂದಿನ ಸಭೆಯಲ್ಲಿ ವಿವರಣೆ ನೀಡಲು ಕೋರಿದೆ. ಗುರುದರ್ಶನ್ ಬಡಾವಣೆಯಲ್ಲಿ ಆರ್.ಸಿ.ಸಿ ಚರಂಡಿ ನಿರ್ಮಾಣವಾಗಿದ್ದು, ಸದರಿ ಚರಂಡಿ ಸಮರ್ಪಕವಾಗಿ ಕಾರ್ಯ ನಿರ್ವಹಿಸದೆ ಇರುವುದರಿಂದ ಪರಿಶೀಲಿಸಿ ಕ್ರಮ ವಹಿಸಲು ಕೋರಿದರು.

ವಿದ್ಯಾರಣ್ಯಪುರ ಮುಖ್ಯ ರಸ್ತೆಯಲ್ಲಿ ಹೆಚ್ಚುವರಿಯಾಗಿ ಗುಂಡಿಗಳು ಬಿದ್ದಿರುವುದರಿಂದ ರಿಸ್ಟೋರ್ ಮಾಡಲು, ಪಾದಚಾರಿ ಮಾರ್ಗಗಳು ಇರುವ ಸ್ಥಳಗಳಲ್ಲಿ ತಳ್ಳುವ ಗಾಡಿಗಳೇ ಹೆಚ್ಚಾಗಿ ಇರುವುದರಿಂದ ಪಾದಚಾರಿ ಮಾರ್ಗವನ್ನು ತೆರವುಗೊಳಿಸದೆ ಇದ್ದಲ್ಲಿ ಸಾರ್ವಜನಿಕರು, ಶಾಲಾ ಮಕ್ಕಳು ಹಿರಿಯ ನಾಗರೀಕರು ಹಾಗು ದೇವಸ್ಥಾನಕ್ಕೆ ಬರುವ ಭಕ್ತಾದಿಗಳಿಗೂ ತುಂಬಾ ತೊಂದರೆ ಉಂಟಾಗಿದ್ದು, ತಾವು ಕ್ರಮ ವಹಿಸದೆ ಇದ್ದಲ್ಲಿ ಮುಖ್ಯ ಆಯುಕ್ತರು ಹಾಗೂ ಘನ ನ್ಯಾಯಾಲಯದ ಮೊರೆ ಹೋಗಲು ನಿರ್ಧರಿಸಿದ್ದೇವೆ ಆದುದರಿಂದ ಕೂಡಲೇ ಕ್ರಮ ವಹಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಕೋರಿದರು.

**ಕ್ರಮ: ಸ.ಕಾ.ಅ, ವಿ.ಉ.ವಿ**

ಬಿ.ಇ.ಎಲ್ 3ನೇ ಬ್ಲಾಕ್ ಮತ್ತು 1ನೇ ಬ್ಲಾಕ್‌ನಲ್ಲಿ ಎಲ್ಲಾ ಸಮಯದಲ್ಲೂ ಒಳಚರಂಡಿ ಪೈಪ್‌ಲೈನ್ ಬ್ಲಾಕ್ ಆಗುತ್ತಿರುವುದರಿಂದ ಕೂಡಲೇ ಒಳಚರಂಡಿ ಪೈಪ್‌ಲೈನ್ ಅನ್ನು ಬದಲಾಯಿಸಲು, ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕಾಮಗಾರಿ ನಡೆಸುವ ಸಮಯದಲ್ಲಿ ಮೇಲಾಧಿಕಾರಿಗಳು ಸ್ಥಳದಲ್ಲಿ ಇರದೆ ಇರುವುದರಿಂದ ಮ್ಯಾನ್‌ಹೋಲ್‌ಗಳು ರಸ್ತೆ ಮಟ್ಟಕ್ಕಿಂದ ಮೇಲ್ಪಟ್ಟದಲ್ಲಿದ್ದು, ವಾಹನ ಸವಾರರಿಗೆ ಸಂಚರಿಸಲು ತೊಂದರೆ ಉಂಟಾಗುತ್ತಿರುತ್ತದೆ ಆದ್ದರಿಂದ ಹಿರಿಯ ಅಧಿಕಾರಿಗಳು ಪರಿಶೀಲಿಸಿ ರಸ್ತೆ ಮಟ್ಟಕ್ಕಿಂತ ಹೆಚ್ಚುವರಿ ಇರುವ ಮ್ಯಾನ್‌ಹೋಲ್‌ಗಳನ್ನು ಸರಿಪಡಿಸಲು ಕೋರಿದರು.

ಬಿ.ಇ.ಎಲ್ ವೈಟ್ ಸ್ಕ್ವೇರ್ ಹಿಂಭಾಗದ 4ನೇ ಮನೆಗೆ ಕುಡಿಯುವ ನೀರಿನ ಸಮಸ್ಯ ಹಾಗೂ ಒಳಚರಂಡಿ ಸಮಸ್ಯ ಇರುವುದರಿಂದ ಖುದ್ದಾಗಿ ಪರಿಶೀಲಿಸಲು ಹಾಗೂ ತಿಂಡ್ಲುನಿಂದ ನಂಜಪ್ಪ ಸರ್ಕಲ್‌ಗೆ ಹಾದು ಹೋಗುವ ರಸ್ತೆಯಲ್ಲಿ ಹೊಸದಾಗಿ ಮ್ಯಾನ್‌ಹೋಲ್‌ಗಳನ್ನು ಅಳವಡಿಸಿದ್ದು, ಸದರಿ ಮ್ಯಾನ್‌ಹೋಲ್‌ಗಳು ರಸ್ತೆ ಮಟ್ಟಕ್ಕಿಂತ ಮೇಲ್ಪಟ್ಟದಲ್ಲಿರುವುದರಿಂದ ಕಾಮಗಾರಿ ನಡೆದಿರುವ ಸ್ಥಳದಲ್ಲಿ ಗುಂಡಿ ಬಿದ್ದು ಹಾಳಾಗಿರುವುದರಿಂದ ರಸ್ತೆಯನ್ನು ಮರುಸ್ಥಿತಿಗೆ ತರಲು ಕೋರಿದರು.

ತಿಂಡ್ಲು ಹಾಗೂ ಬುಲೆಟ್ ಕೃಷ್ಣಪ್ಪ ಬಡಾವಣೆಗಳಲ್ಲಿ ಪ್ಯಾನೆಲ್ ಬೋರ್ಡ್‌ಗಳು ಹಾಳಾಗಿದ್ದು, ಸರಿಪಡಿಸಲು ಕೋರಿದರು.

ಹೆಚ್.ಎಂ.ಟಿ ಲೇಔಟ್ 7ನೇ ಬ್ಲಾಕ್‌ನಲ್ಲಿ ಹೆಚ್ಚುವರಿ ನೀರಿನ ಪೈಪ್ ಲೈನ್ ಹಾದು ಹೋಗಿದ್ದು, ಸದರಿ ರಸ್ತೆಯಲ್ಲಿ ವಾಹನಗಳ ಸಂಚಾರ ದಟ್ಟಣೆಯಿರುವುದರಿಂದ ವಾಹನಗಳು ಓಡಾಡದಂತೆ ಬ್ಯಾರಿಕೇಡ್‌ಗಳನ್ನು ಅಳವಡಿಸಲು ಕೋರಿದರು.

ಪ್ರತಿ ಬಡಾವಣೆಯ ನಿವೇಶನಗಳಲ್ಲಿಯೂ ಕೊಳವೆ ಬಾವಿಗಳನ್ನು ಕೊರೆದು ಮಣ್ಣು ನೀರನ್ನು ಚರಂಡಿಗೆ ಬಿಡುತ್ತಿರುವುದರಿಂದ ಚರಂಡಿ ಬ್ಲಾಕ್ ಆಗಿ ಮಳೆ ನೀರು ರಸ್ತೆಗೆ ಹರಿಯುತ್ತಿರುವುದರಿಂದ ಸಂಬಂಧ ಪಟ್ಟ ಮಾಲೀಕರಿಗೆ ಕ್ರಮ ವಹಿಸಲು ಕೋರಿದರು.

ಬಿ.ಇ.ಎಲ್ ಬಡಾವಣೆ, 6ನೇ ಬ್ಲಾಕ್, 4ನೇ ಮುಖ್ಯ ರಸ್ತೆಯಲ್ಲಿ ಒಳಚರಂಡಿ ನೀರು ರಸ್ತೆಯ ಮುಖಾಂತರ ಹರಿದು ಸ್ವತ್ತಿನ ಸಂಖ್ಯೆ 162ಕ್ಕೆ ಹರಿಯುತ್ತಿರುವುದರಿಂದ ಬಗೆಹರಿಸಲು ಕೋರಿದರು.

**ಕ್ರಮ: ಸ.ಕಾ.ಅ, ಬಿ.ಡಬ್ಲ್ಯೂ.ಎಸ್.ಎಸ್.ಬಿ**

ಡಾ|| ಪುಷ್ಪಲತ, ಆರೋಗ್ಯಾಧಿಕಾರಿ ರವರು ವಿದ್ಯಾರಣ್ಯಪುರ ವ್ಯಾಪ್ತಿಯ ಸರ್ಕಾರಿ ಆಸ್ಪತ್ರೆಯಲ್ಲಿ ಇರುವ ವೈದ್ಯಕೀಯ ಸೌಲಭ್ಯಗಳನ್ನು ಉಪಯೋಗಿಸಿಕೊಳ್ಳುವ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು, ಕೋವಿಡ್ 4ನೇ ಅಲೆ ಹರಡುತ್ತಿರುವ ಹಿನ್ನೆಲೆಯಲ್ಲಿ ವಾರ್ಡ್ ವ್ಯಾಪ್ತಿಯ ಸಾರ್ವಜನಿಕರು ಪ್ರತಿಯೊಬ್ಬರು ಸಾಮಾಜಿಕ ಅಂತರವನ್ನು ಪಾಲಿಸುವುದು ಕಡ್ಡಾಯ, ಮಾಸ್ಕ್ ಧರಿಸುವುದು, ಕಡ್ಡಾಯವಾಗಿರುತ್ತದೆ, 12 ವರ್ಷ ಮೇಲ್ಪಟ್ಟ ಮಕ್ಕಳಿಗೆ ಲಸಿಕೆ ಪ್ರಾರಂಭವಾಗಿರುವುದರಿಂದ ಕಡ್ಡಾಯವಾಗಿ ಲಸಿಕೆ ಹಾಕಿಸಿಕೊಳ್ಳತಕ್ಕದ್ದು, 60 ವರ್ಷ ಮೇಲ್ಪಟ್ಟ ವೃದ್ಧರಿಗೆ ಬೂಸ್ಟರ್ ಡೋಸ್ ನೀಡುತ್ತಿರುವುದರಿಂದ ಲಸಿಕೆಯ ಪ್ರಯೋಜನವನ್ನು ಪಡೆದುಕೊಳ್ಳುವುದು

ಇತ್ತೀಚಿನ ದಿನಗಳಲ್ಲಿ ಸಾಂಕ್ರಮಿಕ ರೋಗಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕೆಂದು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದರ ಜೊತೆಗೆ ಡೆಂಗ್ಯೂ ಜ್ವರ ಹೆಚ್ಚಾಗಿ ಹರಡುತ್ತಿರುವುದರಿಂದ ಸಾರ್ವಜನಿಕರು ಜಾಗರೂಕತೆಯಿಂದ ಇರಬೇಕೆಂದು ತಿಳಿಸಿದರು, ಹಾಗೂ ಟಮೋಟ ಗುನ್ನದಂತಹ ಹೊಸ ಸಾಂಕ್ರಾಮಿಕ ಖಾಯಿಲೆ ಹರಡುತ್ತಿರುವುದರಿಂದ ಚಿಕ್ಕ ಮಕ್ಕಳನ್ನು ಆದಷ್ಟು ಎಚ್ಚರಿಕೆಯಿಂದ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 09, ವಿದ್ಯಾರಣ್ಯಪುರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಿದ್ಯಾರಣ್ಯಪುರ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮ ಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.